( /

ಕರ್ನಾಟಕ ಸರ್ಕಾರ

**<u>ಕಾಲೇಜು ಶಿಕ್ಷಣ ಇಲಾಖೆ</u>**

ಸಂಖ್ಯೆ: ಕಾಶಿಇ/425/ಗ್ರೂಪ್-ಡಿ/2017-18/ನೇ.ವಿ-1

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 6 .08.2018.

## <u>ಸುತ್ತೋಲೆ</u>

ವಿಷಯ: ಕಾಲೇಜಿನ ಶೈಕ್ಷಣಿಕ ಹಾಗೂ ಆಡಳಿತಾತ್ಮಕ ಹಿತದೃಷ್ಟಿಯಿಂದ ದೈನಂದಿನ ಕೆಲಸ ಕಾರ್ಯಗಳನ್ನು ನಿರ್ವಹಿಸಲು ಖಾಲಿ ಇರುವ ಗ್ರೂಪ್-ಡಿ ನೌಕರರ ಸೇವೆಯನ್ನು ಹೊರಗುತ್ತಿಗೆ ಆಧಾರದ ಮೇಲೆ ಬಳಸಿಕೊಳ್ಳುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಪತ್ರ ಸಂಖ್ಯೆ: ಆಇ 336 ಆನಿ 2018, ದಿನಾಂಕ:19.07.2018.
2) ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ ದಿನಾಂಕ:14.03.2018.

* * * * *

ಉಲ್ಲೇಖ-(1)ರ ಸರ್ಕಾರದ ಪತ್ರದಲ್ಲಿ ಸೂಚಿಸಲಾದಂತೆ, ಉಲ್ಲೇಖ-(2)ರ ಈ ಕಛೇರಿಯ ಸುತ್ತೋಲೆಯಲ್ಲಿ *'ಹೊರಗುತ್ತಿಗೆ ಆಧಾರದ ಮೇಲೆ ಸೇವೆಯನ್ನು ಬಳಸಿಕೊಳ್ಳುವಾಗ ಈಗಾಗಲೇ ಆಯಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅನ್‌ಸ್ಕಿಲ್ಡ್/ಅರೆಕಾಲಿಕ ನೌಕರರನ್ನು ಆದ್ಯತೆ ಮೇರೆಗೆ ಪರಿಗಣಿಸುವುದು'* ಎಂಬುದಾಗಿ ತಿಳಿಸಿರುವುದನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಿಂಪಡೆಯಲಾಗಿದೆ.

ಮುಂದುವರೆದು, ಕಾಲೇಜಿನ ಶೈಕ್ಷಣಿಕ ಹಾಗೂ ಆಡಳಿತಾತ್ಮಕ ಹಿತದೃಷ್ಟಿಯಿಂದ ದೈನಂದಿನ ಕೆಲಸ ಕಾರ್ಯಗಳನ್ನು ನಿರ್ವಹಿಸಲು ಖಾಲಿ ಇರುವ ಗ್ರೂಪ್-ಡಿ ನೌಕರರ ಸೇವೆಯನ್ನು ಹೊರಗುತ್ತಿಗೆ ಆಧಾರದ ಮೇಲೆ ಬಳಸಿಕೊಳ್ಳುವ ಸಂಬಂಧ ಅನುಸರಿಸಬೇಕಾದ ಮಾರ್ಗಸೂಚಿಗಳ ಕುರಿತು ಶೀಘ್ರವೇ ಸುತ್ತೋಲೆಯನ್ನು ಹೊರಡಿಸಲಾಗುವುದು.

ಕಾಲೇಜು ಶಿಕ್ಷಣ ಆಯುಕ್ತರು

<u>ಪ್ರತಿಯನ್ನು:</u>

1) ಎಲ್ಲಾ ಪ್ರಾದೇಶಿಕ ಕಛೇರಿಯ ಜಂಟಿ ನಿರ್ದೇಶಕರುಗಳಿಗೆ.
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3) ಎಲ್ಲಾ ಅಧಿಕಾರಿಗಳ ಆಪ್ತ ಸಹಾಯಕರುಗಳಿಗೆ.
4) ಕೇಂದ್ರ ಕಛೇರಿಯ ಎಲ್ಲಾ ವಿಭಾಗದ ಮ್ಯಾನೇಜರ್/ಅಧೀಕ್ಷಕರುಗಳಿಗೆ.
5) ಕಛೇರಿ ಪ್ರತಿ.